**ಚಿನ್ಮೋಯ್ ಕೃಷ್ಣ ದಾಸ್ ಬಂಧನದ ಕುರಿತು ಹೇಳಿಕೆ**

ನವೆಂಬರ್ 26, 2024

ಬಾಂಗ್ಲಾದೇಶ ಸಮ್ಮಿಲಿತ್ ಸನಾತನ ಜಾಗರಣ ಜೋಟೆಯ ವಕ್ತಾರರೂ ಆಗಿರುವ ಶ್ರೀ ಚಿನ್ಮೋಯ್ ಕೃಷ್ಣ ದಾಸ್ ಅವರ ಬಂಧನ ಮತ್ತು ಜಾಮೀನು ನಿರಾಕರಣೆಯು ನಮ್ಮ ಗಮನಕ್ಕೆ ಬಂದಿದ್ದು, ಈ ಘಟನೆ ತೀವ್ರ ಕಳವಳಕಾರಿಯಾಗಿದೆ. ಈ ಘಟನೆಯೊಂದಿಗೆ ಬಾಂಗ್ಲಾದೇಶದಲ್ಲಿ ಉಗ್ರಗಾಮಿ ಶಕ್ತಿಗಳಿಂದ ಹಿಂದೂಗಳು ಮತ್ತು ಇತರ ಅಲ್ಪಸಂಖ್ಯಾತರ ಮೇಲೆ ಅನೇಕ ದಾಳಿಗಳು ಮುಂದುವರಿದಿವೆ. ಅಲ್ಪಸಂಖ್ಯಾತರ ಮನೆಗಳು ಮತ್ತು ವ್ಯಾಪಾರ ಸಂಸ್ಥೆಗಳಿಗೆ ಬೆಂಕಿ ಹಚ್ಚುವುದು ಮತ್ತು ಲೂಟಿ ಮಾಡುವ ಹಲವಾರು ಪ್ರಕರಣಗಳು ದಾಖಲಾಗಿವೆ, ಜೊತೆಗೆ ಕಳ್ಳತನ ಮತ್ತು ವಿಧ್ವಂಸಕತೆ ಮತ್ತು ದೇವರು ಹಾಗೂ ದೇವಾಲಯಗಳನ್ನು ಅಪವಿತ್ರಗೊಳಿಸುವ ಕೃತ್ಯಗಳಂತಹ ಪ್ರಕರಣಗಳು ನಡೆದಿವೆ.

ಈ ಘಟನೆಗಳಿಗೆ ಕಾರಣಕರ್ತರಾದ ದುಷ್ಕರ್ಮಿಗಳು ತಲೆಮರೆಸಿಕೊಂಡಿದ್ದರೂ, ಶಾಂತಿಯುತ ಸಭೆಗಳ ಮೂಲಕ ನ್ಯಾಯಸಮ್ಮತವಾದ ಬೇಡಿಕೆಗಳನ್ನು ಮಂಡಿಸುವ ಧಾರ್ಮಿಕ ಮುಖಂಡರ ವಿರುದ್ಧ ಆರೋಪಗಳನ್ನು ಹೊರಿಸುತ್ತಿರುವುದು ದುರದೃಷ್ಟಕರವಾಗಿದೆ. ಶ್ರೀ ದಾಸ್ ಅವರ ಬಂಧನವನ್ನು ವಿರೋಧಿಸಿ ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿರುವ ಅಲ್ಪಸಂಖ್ಯಾತರ ಮೇಲೆ ನಡೆಸುತ್ತಿರುವ ಹಲ್ಲೆಗಳು ಕೂಡ ನಮ್ಮ ಗಮನಕ್ಕೆ ಬಂದಿದ್ದು ತೀವ್ರ ಕಳವಳಕಾರಿಯಾಗಿದೆ.

ಶಾಂತಿಯುತ ಸಭೆ ನಡೆಸುವ ಮತ್ತು ಅವರ ಅಭಿವ್ಯಕ್ತಿ ಸ್ವಾತಂತ್ರ್ಯದ ಹಕ್ಕು ಸೇರಿದಂತೆ ಹಿಂದೂಗಳು ಮತ್ತು ಎಲ್ಲಾ ಅಲ್ಪಸಂಖ್ಯಾತರಿಗೆ ಖಚಿತ ಸುರಕ್ಷತೆ ಮತ್ತು ಭದ್ರತೆಯನ್ನು ಒದಗಿಸುವಂತೆ ನಾವು ಬಾಂಗ್ಲಾದೇಶದ ಅಧಿಕಾರಿಗಳನ್ನು ಒತ್ತಾಯಿಸುತ್ತೇವೆ.

**ನವದೆಹಲಿ ನವೆಂಬರ್ 26, 2024**